## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 41(104) |
| ಮಾನ್ಯ ಸದಸ್ಯರ ಹೆಸರು | : | ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರಕ್ಷೇತ್ರ) |
| ಉತ್ತರಿಸುವ ದಿನಾಂಕ | : | 07.12.2020 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಮತ್ತು ಅನುದಾನರಹಿತ ಶಾಲಾ ಶಿಕ್ಷಕರಿಗೆ ಕಾಲ್ಪನಿಕ ವೇತನ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನುದಾನಿತ ಶಿಕ್ಷಕರಿಗೆ ಅವರ ಅನುದಾನರಹಿತ ಅವಧಿಗೆ ಕಾಲ್ಪನಿಕ ವೇತನ ಬಡ್ತಿ ನೀಡಲು ಅವಕಾಶವಿರುವುದಿಲ್ಲ. |
| ಆ) | ಬಂದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಕಾಲ್ಪನಿಕ ವೇತನ ನೀಡಲಾಗುವುದು? (ಮಾಹಿತಿ ನೀಡುವುದು) | ಅನುದಾನ ಸಂಹಿತೆಯ ಪ್ರಕಾರ ಅನುದಾನಕ್ಕೊಳಪಟ್ಟ ಸಿಬ್ಬಂದಿಗೆ ಅನುದಾನ ದೊರೆತ ದಿನಾಂಕದಿಂದ ಮಾತ್ರ ಕನಿಷ್ಟ ವೇತನ ನಿಗದಿ ಮಾಡಬೇಕು ಹಾಗೂ ಹಿಂದಿನ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಈ ಸಂಬಂಧ ಸರ್ಕಾರವು ದಿನಾಂಕ:01.06.1995ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂಧಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಜಾರಿಗೆ ತರಲಾಗಿದೆ.<br>ಈ ಅಧಿನಿಯಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂಧಿಗಳು ಪ್ರಶ್ನಿಸಿರುವ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಂಬಂಧದ ಪ್ರಕರಣಗಳಲ್ಲಿ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:10.07.2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮವನ್ನು " **struck down** " ಮಾಡಿರುತ್ತದೆ.<br>ಮೇಲಿನ ಮಾನ್ಯ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅಪೀಲ್ ಸಂಖ್ಯೆ:2476/2015 ಮತ್ತು 2467/2015ನ್ನು ದಾಖಲಿಸಿದೆ. ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ:27.11.2015ರಂದು ತಡೆಯಾಜ್ಞೆ ನೀಡಿರುತ್ತದೆ. ಸದರಿ ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು, ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ. |

ಸಂ:ಇಪಿ 363 ಎಸ್ಇಎಸ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು